# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 3039 (2502)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು: ವಸತಿ ಸಚಿವರು

ವಿಷಯ : ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ವಸತಿ ಯೋಜನೆಯ ಕುರಿತು

(ಅ) ಕಳೆದ ಮೂರು ವರ್ಷಗಳಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ವಿವಿಧ ವಸತಿ ಯೋಜನೆಯಡಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು;(ಯೋಜನೆವಾರು ಮತ್ತು ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಮನೆಗಳಲ್ಲಿ ಪೂರ್ಣವಾದ ಮತ್ತು ಅಪೂರ್ಣವಾಗಿರುವ ಮನೆಗಳ ಸಂಖ್ಯೆ ಎಷ್ಟು; (ಯೋಜನೆವಾರು ಮತ್ತು ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಸದರಿ ಮನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ಹಾಗೂ ಬಾಕಿ ಇರುವ ಅನುದಾನ ಎಷ್ಟು; (ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಈ) ಸದರಿ ಮನೆಗಳಿಗೆ ಅನುದಾನದ ಕೊರತೆ ಇದೆಯೇ;

(ಉ) ಬಡ ಜನರು ಹಲವಾರು ಕಾರಣಗಳಿಂದ ಮಂಜೂರಾದ ಮನೆಗಳನ್ನು ಕಟ್ಟಿಕೊಳ್ಳಲಾಗದೆ; ಬ್ಲಾಕ್ ಅಥವಾ ಲ್ಯಾಪ್ಸ್ ಆಗುವುದರೊಂದಿಗೆ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ;

(ಊ) ಬ್ಲಾಕ್ ಆಗಿರುವ ಮನೆಗಳನ್ನು ಕಟ್ಟಿಕೊಳ್ಳಲು ಜನರಿಗೆ ಮತ್ತೊಮ್ಮೆ ಅವಕಾಶ ಕೊಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?